ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಭವನ ಕಟ್ಟಡದ ನಿರ್ಮಾಣಕ್ಕಾಗಿ ಅನುದಾನವನ್ನು ಹಂಚಿಕೆ ಮಾಡುವ ಕುರಿತು.

ಓದಲಾಗಿದೆ:

1. ಸಚಿವ ಸಂಪುಟ ಟಿಪ್ಪಣಿ ವಿಷಯ ಸಂಖ್ಯೆ:ಸಿ/324/2018, ದಿನಾಂಕ:13-03-2018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 06 ತಾಪಸ 2011, ದಿನಾಂಕ:24-03-2018.

ಪ್ರಸ್ತಾವನೆ:

2019-20ನೇ ಸಾಲಿನ ಕರ್ನಾಟಕ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ 2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಿಗಾಗಿ ರೂ.20.00ಕೋಟಿಗಳನ್ನು ಒದಗಿಸಲಾಗಿದೆ. ಮೇಲೆ ಓದಲಾದ(1)ರ ಸಚಿವ ಸಂಪುಟದ ನಿರ್ಣಯದಂತೆ ಹಾಗೂ ಮೇಲೆ ಓದಲಾದ (2)ರ ಸರ್ಕಾರಿ ಆದೇಶದನ್ವಯ ಪಂಚಾಯತ್ ರಾಜ್ ಭವನ ನಿರ್ಮಾಣಕ್ಕಾಗಿ ತಗಲುವ ವಾಸ್ತವಿಕ ವೆಚ್ಚವನ್ನು ಲೆಕ್ಕ ಶೀರ್ಷಿಕೆ:2215-01-102-1-16-059 (ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಡಿ ಮುಂದಿನ ಆರ್ಥಿಕ ವರ್ಷಗಳಲ್ಲಿ ಇಲಾಖೆಗೆ ನಿಗಧಿಪಡಿಸಿದ ಅನುದಾನದಿಂದ ಭರಿಸಲಾಗುವುದೆಂದು ಆದೇಶಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ 2019-20ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.20.00ಕೋಟಿಗಳಲ್ಲಿ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಭವನ ಕಟ್ಟಡ ನಿರ್ಮಾಣಕ್ಕಾಗಿ ರೂ.20.00ಕೋಟಿಗಳನ್ನು ಹಂಚಿಕೆ ಮಾಡಲು ನಿರ್ಧರಿಸಲಾಗಿದೆ. ಅದರಂತೆ, 2019-20ನೇ ಸಾಲಿನ ಲೆಕ್ಕ ಶೀರ್ಷಿಕೆ 2215-01-102-1-16-059(ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿ ಇತರೆ ಖರ್ಚುಗಳಿಗಾಗಿ ಒದಗಿಸಿರುವ ಅನುದಾನವನ್ನು ಹಂಚಿಕೆ ಮಾಡಲು ತೀರ್ಮಾನಿಸಲಾಗಿರುತ್ತದೆ. ಅದಕ್ಕಾಗಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 06 ತಾಪಸ 2011(ಪಿ-1), ದಿನಾಂಕ:19-07-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ರಾಜ್ಯ ಆಯವ್ಯಯದ ಲೆಕ್ಕ ಶೀರ್ಷಿಕೆ:2215-01-102-1-16-059(ಗ್ರಾಮೀಣಾಭಿವೃದ್ಧಿ ಭವನ ಮತ್ತು ಇತರೆ ಕಟ್ಟಡಗಳ)ರಡಿಯ ಇತರೆ ಖರ್ಚುಗಳಿಗಾಗಿ ಒದಗಿಸಲಾದ ರೂ.20.00ಕೋಟಿಗಳನ್ನು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಭವನ ಕಟ್ಟಡದ ನಿರ್ಮಾಣಕ್ಕಾಗಿ ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

1. ಮೇಲೆ ಹಂಚಿಕೆ ಮಾಡಿರುವ ಅನುದಾನವನ್ನು ಸಂಬಂಧಪಟ್ಟ ನಿರ್ದೇಶಕರು/ಮುಖ್ಯಸ್ಥರು ಸ್ಥಳವನ್ನು ಗುರುತಿಸಿ ಅನುಮೋದನೆ ಪಡೆದುಕೊಳ್ಳುವುದು.
2. ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದುಕೊಂಡು ಅನುಷ್ಠಾನ ಏಜೆನ್ಸಿಗೆ ಅನುದಾನ ಬಿಡುಗಡೆ ಮಾಡಲು ಅಗತ್ಯ ಕ್ರಮ ವಹಿಸುವುದು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ:03.04.2019ರ ಆಯಾ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತಗೊಳಿಸಲಾಗಿರುವ ಅಧಿಕಾರದನ್ವಯ ಹಂಚಿಕೆ ಮಾಡಲು ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/7/2019
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

19.07.19

ಗೆ:

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.
4. ವಿಶೇಷಾಧಿಕಾರಿಗಳು(ಜಿ.ಪಂ) ಆರ್ಥಿಕ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆ.
6. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಖನಿಜ ಭವನ, ಬೆಂಗಳೂರು.
7. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಕಂಪ್ಯೂಟರ್ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.